372 ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 50 ಹಾಸಿಗೆಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ ಸಾಲಿನಿಂದ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 2001 ರ ಜನಗಣತಿ ಪ್ರಕಾರ ಕೊಪ್ಪಳ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆಯು 2,49.640 ಆಗಿದೆ. ಮಾರ್ಗಸೂಚಿಗಳ ಪ್ರಕಾರ ಎರಡು ಸಮುದಾಯ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಬಹುದಾಗಿದ್ದು, ಅದರಂತೆ, ಎರಡು ಸಮುದಾಯ ಆರೋಗ್ಯ ಕೇಂದ್ರಗಳು ಅಂದರೆ ಹಿರೇಸಿಂದಗಿ ಮತ್ತು ಮುನಿರಾಬಾದ್ ಪ್ರಿಸನ್ ಆಸ್ಪತ್ರೆ ಇಲ್ಲಿ ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಸದರಿ ತಾಲ್ಲೂಕಿಗೆ ಇನ್ನೂ ಹೆಚ್ಚಿನ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

546 ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕು ಅರೇಹಳ್ಳಿ ಗ್ರಾಮದ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗಿದೆಯೇ;

ಆ) ಮೇಲ್ದರ್ಜೆಗೇರಿಸಲಾಗಿದ್ದರೆ ಸಿಬ್ಬಂದಿ, ವೈದ್ಯರ ನೇಮಕ ಹಾಗೂ ಕಟ್ಟಡ ನಿರ್ಮಾಣ ಇದುವರೆವಿಗೆ ಆಗಿಲ್ಲದಿರುವುದು ನಿಜವೇ;

ಇ) ಇದಕ್ಕೆ ಕಾರಣ ಏನು; ಈ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಾಥಮಿಕ ಆರೋಗ್ಯ ಕೇಂದ್ರ ಅರೇಹಳ್ಳಿಯನ್ನು ಸಮುದಾಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು 2007ರಲ್ಲಿ ಆದೇಶ ಹೊರಡಿಸಲಾಗಿದೆ.

ಆ) ಅರೇಹಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 6 ಹಾಸಿಗೆಗಳಿಂದ 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ 2007 ರಲ್ಲಿ ಮೇಲ್ದರ್ಜೆಗೇರಿಸಲಾಗಿದ್ದರೂ, ಸಮುದಾಯ ಆರೋಗ ಕೇಂದ್ರದ ಕಟ್ಟಡ ಕಾಮಗಾರಿಯನ್ನು ತೆಗೆದುಕೊಂಡಿರುವುದಿಲ್ಲ. ಪ್ರಸ್ತುತ ಈ ಆಸ್ಪತ್ರೆಯು 6 ಹಾಸಿಗೆಗಳ ಆಸ್ಪತ್ರೆಯಾಗಿದ್ದು, ಅದಕ್ಕನುಗುಣವಾಗಿ ವೈದ್ಯರು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ. ಸಮುದಾಯ ಆರೋಗ್ಯ ಕೇಂದ್ರದ ಕಟ್ಟಡ ಶೇಕಡಾ 60 ರಷ್ಟು ಪೂರ್ಣಗೊಂಡ ನಂತರ ಹೆಚ್ಚುವರಿ ವೈದ್ಯರು, ಸಿಬ್ಬಂದಿ ಹಾಗೂ ಇತರೆ ಸೌಲಭ್ಯವನ್ನು ಪಡೆಯಲು ಈ ಆಸ್ಪತ್ರೆಗೆ ಅರ್ಹತೆ ಲಭಿಸುತ್ತದೆ.

ಇ) ಸರ್ಕಾರದ ಪ್ರಸ್ತುತ ಆದ್ಯತೆ ಪ್ರಕಾರ ಚಾಲ್ತಿಯಲ್ಲಿರುವ ಕಟ್ಟಡ ಕಾಮಗಾರಿಗಳನ್ನು ಪೂರೈಸಬೇಕಾಗಿದೆ. ಆದುದರಿಂದ ಹೊಸ ಕಾಮಗಾರಿ ಗಳನ್ನು ತೆಗೆದುಕೊಂಡಿರುವುದಿಲ್ಲ.

435 ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸರ್ಕಾರವು ಆರಂಭಿಸಿರುವ ಹಾಗೂ ಆರಂಭಿಸಲಿರುವ ನೂತನ ಯೋಜನೆಗಳಾವುವು;

ಆ) ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಯಲ್ಲಿ ಕೇವಲ ಅಂಕಗಳನ್ನು ಪರಿಗಣಿಸಿದರೆ ಅಶಕ್ತ ಬಡ ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳಿಗೆ ಅನ್ಯಾಯವಾಗುತ್ತಿದೆಯಲ್ಲವೆ;

ಇ) ಆಯ್ಕೆ ಸಮಿತಿ ಜನಪ್ರತಿನಿಧಿಗಳ ನೇತೃತ್ವದಲ್ಲಿ ರಚಿಸುವ ಉದ್ದೇಶ ಸರ್ಕಾರಕ್ಕಿದೆಯೆ?